ಊ) ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ದಾಖಲಾಗಿರುವ ಪ್ರಕರಣಗಳು ಇತ್ಯರ್ಥಕ್ಕೆ ಬಾಕಿಯಿದ್ದು ಪ್ರಕರಣಗಳನ್ನು ಇತ್ಯರ್ಥ ಪಡಿಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.

ರಾಜ್ಯದಲ್ಲಿನ ಕೈಮಗ್ಗ ನೇಕಾರರ ಸಮಸ್ಯೆ

240 (238); ಶ್ರೀ ಗೋಪಾಲಯ್ಯ ಕೆ. (ಮಹಾಲಕ್ಷ್ಮಿ ಲೇಔಟ್)

ಅ) ರಾಜ್ಯದಲ್ಲಿ ಕೈಮಗ್ಗ ನೇಕಾರಿಕೆಯಲ್ಲಿ ತೊಡಗಿಸಿಕೊಂಡಿರತಕ್ಕ ಕುಟುಂಬಗಳೆಷ್ಟು;

ಆ) ಕೈಮಗ್ಗ ನೇಕಾರಿಕೆಯಲ್ಲಿ ವಿದ್ಯುತ್ ಮಗ್ಗಗಳನ್ನು ಅಳವಡಿಸುವ ಯೋಜನೆಯನ್ನು ಸರ್ಕಾರ ಜಾರಿಗೆ ತಂದಿದೆಯೇ;

ಇ) ಇದರಿಂದ ಕೈಮಗ್ಗ ನೇಕಾರರ ಕುಲಕಸುಬು ನಾಶವಾಗುವುದಿಲ್ಲವೇ?

ಈ) ಹಾಗಿದ್ದಲ್ಲಿ ಕೈಮಗ್ಗ ನೇಕಾರರಿಗೆ ಕೆಲಸವಿಲ್ಲದೆ ಬೀದಿಪಾಲಾಗುವ ಸಾಧ್ಯತೆಗಳನ್ನು ತಪ್ಪಿಸಲು ಸರ್ಕಾರ ಕೈಗೊಂಡ ಕ್ರಮಗಳೇನು?

ಉ) ಕೈಮಗ್ಗ ನೇಕಾರಿಕೆಯಲ್ಲಿ ವಿದ್ಯುತ್ ಮಗ್ಗಗಳನ್ನು ಅಳವಡಿಸುವ ಯೋಜನೆಯನ್ನು ತರಲು ಕಾರಣಗಳೇನು;

ಊ) ಈ ಯೋಜನೆಯನ್ನು ನಿಲ್ಲಿಸಲು ಸರ್ಕಾರ ಆಲೋಚಿಸುತ್ತದೆಯೇ?

ಶ್ರೀ ಬಾಬುರಾವ್ ಚಿಂಚನಸೂರ್ (ಜವಳಿ ಹಾಗೂ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು)

ಅ) ಕೇಂದ್ರ ಸರ್ಕಾರದ 2009 – 10ನೇ ಸಾಲಿನ ಕೈಮಗ್ಗ ಗಣತಿಯಂತೆ ರಾಜ್ಯದಲ್ಲಿ 37680 ಕೈಮಗ್ಗ ನೇಕಾರರ ಕುಟುಂಬಗಳು ಇರುತ್ತವೆ.

ಆ) ಕೈಮಗ್ಗ ನೇಕಾರಿಕೆಯಲ್ಲಿ ವಿದ್ಯುತ್ ಮಗ್ಗಗಳನ್ನು ಅಳವಡಿಸುವ ಯೋಜನೆಯನ್ನು ಸರ್ಕಾರವು ಜಾರಿಗೆ ತಂದಿರುವುದಿಲ್ಲ.

ಇ) ವಿದ್ಯುತ್ ಮಗ್ಗ ಅಳವಡಿಸುವ ಯೋಜನೆ ಇರುವುದಿಲ್ಲ. ಆದ್ದರಿಂದ, ಕುಲಕಸುಬು ನಾಶವಾಗುವ ಪ್ರಶ್ನೆ ಉದ್ಭವಿಸುವುದಿಲ್ಲ.

ಈ) ಉದ್ಭವಿಸುವುದಿಲ್ಲ .

ಉ) ಜಾರಿಗೆ ತಂದಿರುವುದಿಲ್ಲ .

ಊ) ಅನ್ವಯಿಸುವುದಿಲ್ಲ .

ಸರ್ಕಾರಿ ಸ್ವಾಮ್ಯದ ಕೈಗಾರಿಕೆಗಳು

241(239); ಶ್ರೀ ಗೋಪಾಲಯ್ಯ .ಕೆ (ಮಹಾಲಕ್ಷ್ಮೀ ಲೇಔಟ್)

ರಾಜ್ಯದಲ್ಲಿ 2011–12 ನೇ ಸಾಲಿನಲ್ಲಿ ಲಾಭ ಗಳಿಸಿದ ಸರ್ಕಾರಿ ಸ್ವಾಮ್ಯದ ಸಣ್ಣ ಕೈಗಾರಿಕೆಗಳು / ಸಂಸ್ಥೆಗಳ ವಿವರ ನೀಡುವುದು;.

ಆ) ಮೇಲ್ಕಂಡ ಅವಧಿಯಲ್ಲಿ ನಷ್ಟದಲ್ಲಿದ್ದ ಸರ್ಕಾರಿ ಸ್ವಾಮ್ಯದ ಕೈಗಾರಿಕೆಗಳು ಯಾವುವು?

ಇ) ಇಲ್ಲಿಯವರೆಗೆ ಎಷ್ಟು ಸರ್ಕಾರಿ ಸ್ವಾಮ್ಯದ ಕೈಗಾರಿಕೆಗಳನ್ನು ಮುಚ್ಚಲಾಗಿದೆ; (ಕೈಗಾರಿಕೆಗಳ ವಿವರ ನೀಡುವುದು);

ಈ) ರಾಜ್ಯ ಸರ್ಕಾರದ ಸರ್ಕಾರಿ ಸ್ವಾಮ್ಯದ ಸಂಸ್ಥೆಗಳ ಪೈಕಿ ಯಾವ ಯಾವ ಕೈಗಾರಿಕೆಗಳಿಗೆ ಅಧ್ಯಕ್ಷರನ್ನು ನೇಮಿಸಲಾಗಿದೆ :

ಉ) ಲಾಭದಲ್ಲಿರುವ ಕೈಗಾರಿಕೆಗಳಿಗೆ ಮಾತ್ರ ಸರ್ಕಾರ ಅಧ್ಯಕ್ಷರನ್ನು ನೇಮಿಸಲು ನಿರ್ಧರಿಸಿದೆಯೇ ?

ಶ್ರೀ ಪ್ರಕಾಶ್ ಬಾಬಣ್ಣ ಹುಕ್ಕೇರಿ (ಮಾನ್ಯ ಸಣ್ಣ ಕೈಗಾರಿಕೆಗಳು, ಮುಜರಾಯಿ ಮತ್ತು ಸಕ್ಕರೆ ಸಚಿವರು)

ಅ) ರಾಜ್ಯದಲ್ಲಿ (ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆಗೆ ಸಂಬಂಧಿಸಿದಂತೆ) ಸರ್ಕಾರಿ ಸ್ವಾಮ್ಯದ ಸಣ್ಣ ಪ್ರಮಾಣದ ಕೈಗಾರಿಕೆಗಳು ಇರುವುದಿಲ್ಲ.